**ಎಂವಿಸಿ ಸಂಖ್ಯೆ: 145/2024 ಪಿಡಬ್ಲೂ:1**

**ದಿನಾಂಕ: 12-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದ:**

ನನ್ನ ಮುಖ್ಯ ವಿಚಾರಣೆಯ ಬಾಬ್ತು ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿ ಬರೆಸಿರುವ ಎಲ್ಲ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿ ಬರೆದಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸಾಕ್ಷಿದಾರರು ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

1. ಅಪಘಾತಕ್ಕೆ ಸಂಬಂಧಿಸಿದ ಪ್ರ.ವ. ವರದಿಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
2. ದೂರಿನ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.
3. ಸ್ಥಳ ಪಂಚನಾಮೆಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು ನಕ್ಷೆಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.
4. ವಾಹನದ ಪಂಚನಾಮೆಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.
5. ಶವ ತನಿಖಾ ವರದಿಯನ್ನು ನಿಪಿ-5 ಎಂದು ಗುರುತಿಸಲಾಯಿತು.
6. ಶವ ಪರೀಕ್ಷಾ ವರದಿಯನ್ನು ನಿಪಿ-6 ಎಂದು ಗುರುತಿಸಲಾಯಿತು.
7. ಐಎಂವಿ ವರದಿಯ ದೃಡೀಕೃತ ನಕಲು ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.
8. ಅಂತಿಮ ವರದಿಯನ್ನು ನಿಪಿ-8 ಎಂದು ಗುರುತಿಸಲಾಯಿತು.
9. ನನ್ನ ಮೂಲ ಆಧಾರ ಕಾರ್ಡನ್ನು ನಿಪಿ-9 ಎಂದು ಗುರುತಿಸಲಾಯಿತು.
10. ನನ್ನ ಗಂಡ ಮಂಜುನಾಥ ಈತನ ಮೂಲ ಆಧಾರ ಕಾರ್ಡನ್ನು ನಿಪಿ-10 ಎಂದು ಗುರುತಿಸಲಾಯಿತು.
11. ನನ್ನ ಬ್ಯಾಂಕ್ ಪಾಸ್ ಪುಸ್ತಕವನ್ನು ನಿಪಿ-11 ಎಂದು ಗುರುತಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಅರ್ಜಿಯನ್ನು ಪುರಸ್ಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲು: 2 ನೇ ಎದುರುದಾರರ ಪರ ವಕೀಲರಿಂದ**

ನಾನು ಈ ಪ್ರಕರಣದಲ್ಲಿ ಯಾವ ಯಾವ ದಾಖಲೆಗಳನ್ನು ಸಲ್ಲಿಸಿರುತ್ತೇನೆ ಎಂದು ಮಾಹಿತಿ ಇಲ್ಲ. ಸುಧಾಕರ ನನ್ನ ಮಗ ಎಂದು ತೋರಿಸಲು ವಾರಸಾ ಪ್ರಮಾಣ ಪತ್ರ

ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಎಂದರೆ ಸರಿ ಅಲ್ಲ. ಸುಧಾಕರ ಈತನಿಗೆ ಅಪಘಾತದ ಸಮಯದಲ್ಲಿ 29 ವರ್ಷ ವಯಸ್ಸು ಇತ್ತು ಎಂದು ತೋರಿಸಲು ಆಧಾರ ಕಾರ್ಡ ಸಲ್ಲಿಸಿಲ್ಲ ಎಂದರೆ ಆ ದಿನ ಆತನ ಜೊತೆ ಕಳೆದು ಹೋಗಿದೆ ಎಂದು ಹೇಳುತ್ತಾರೆ. ಅಪಘಾತ ಸಮಯದಲ್ಲಿ ಆತನಿಗೆ 35 ವರ್ಷ ವಯಸ್ಸಾಗಿತ್ತು ಎಂದರೆ ಸರಿ ಅಲ್ಲ. ಮೃತ ಸುಧಾಕರ ಪಿಯುಸಿವರೆಗೆ ವಿದ್ಯಾಭ್ಯಾಸ ಮಾಡಿರುತ್ತಾನೆ. ಆತನ ಎಸ್ಎಸ್ಎಲ್ಸಿ ಮಾರ್ಕ್ಸ ಕಾರ್ಡ ಎಲ್ಲ ಆತನ ಕಾಲೇಜಿನಲ್ಲಿದ್ದಾವೆ. ನಮ್ಮ ಗ್ರಾಮದಲ್ಲಿ ಇರುವ ಶಾಲೆಯಲ್ಲಿ ಆತ 7 ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿರುತ್ತಾನೆ.

ಮುಂದುವರಿದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

**(ಓ.ಹೇ.ಕೇ.ಸ.)**

**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ರಾಣೆಬೆನ್ನೂರ.**

ಸಾಕ್ಷಿದಾರರ ಸಹಿಃ